ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

3

ಇಲಾಖೆ / ವಿಷಯ : DEPARTMENT / SUBJECT: ಬಿಬಿಎಂಪಿ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ    ದಿನಾಂಕ : DATE : 5/7/2020

# ಕ್ಷಮೆ ಯಾಚಿಸಿದ ಆಯುಕ್ತ



ಮೃತ ವ್ಯಕ್ತಿಯ ಮನೆಯವರಿಗೆ ಕೈಮುಗಿದು ಕ್ಷಮೆ ಕೋರಿದ ಬಿಬಿಎಂಪಿ ಆಯುಕ್ತ ಬಿ.ಎಚ್‌.ಅನಿಲ್‌ಕುಮಾರ್

ಆಂಬುಲೆನ್ಸ್‌ಗಾಗಿ ಕಾದು ಕುಳಿತು ರಸ್ತೆಯಲ್ಲೇ ಮೃತಪಟ್ಟ ಹನುಮಂತ ನಗರದ ಕೊರೊನಾ ಸೋಂಕಿತ ವ್ಯಕ್ತಿಯ ಮನೆಗೆ ಬಿಬಿಎಂಪಿ ಆಯುಕ್ತ ಬಿ.ಎಚ್. ಅನಿಲ್ ಕುಮಾರ್ ಶನಿವಾರ ಭೇಟಿ ನೀಡಿ ಕುಟುಂಬದವರ ಕ್ಷಮೆಯಾಚಿಸಿದರು.

'ಇಂತಹ ಘಟನೆ ನಡೆಯಬಾರದಿತ್ತು. ಇದಕ್ಕೆ ವಿಷಾದ ವ್ಯಕ್ತಪಡಿಸುತ್ತೇನೆ. ಪಾಲಿಕೆ ಅಧಿಕಾರಿಗಳು ಮತ್ತು ಸಿಬ್ಬಂದಿ ಪರವಾಗಿ ಕ್ಷಮೆ ಕೋರುತ್ತೇನೆ' ಎಂದು ಕುಟುಂಬದವರನ್ನು ಸಮಾಧಾನಪಡಿಸಿದರು.

55 ವರ್ಷದ ವ್ಯಕ್ತಿಗೆ ಕೊರೊನಾ ಸೋಂಕು ತಗುಲಿರುವುದು ಶುಕ್ರವಾರ ಬೆಳಿಗ್ಗೆ ದೃಢಪಟ್ಟಿತ್ತು. ಆಂಬುಲೆನ್ಸ್‌ಗೆ ಕರೆ ಮಾಡಿದ್ದ ಅವರು ಆಸ್ಪತ್ರೆಗೆ ದಾಖಲಾಗಲು ಸಜ್ಜಾಗಿದ್ದರು. ಆಂಬುಲೆನ್ಸ್‌ಗಾಗಿ ಗಂಟೆ ಗಟ್ಟಲೆ ಕಾದಿದ್ದ ಅವರು ರಸ್ತೆ ಬದಿಯೇ ಕುಸಿದು ಬಿದ್ದು ಮೃತಪಟ್ಟಿದ್ದರು.